# ಕರ್ನಾಟಕ ಸರ್ಕಾರ ಕಾರ್ಮಿಕ ಇಲಾಖೆ

ಸಂ: ಪಿಇಎಸ್/ಎನ್ಎಫ್ಹೆಚ್/ಸಿಆರ್-03/2020-21

ಕಾರ್ಮಿಕ ಆಯುಕ್ತರ ಕಚೇರಿ
'ಕಾರ್ಮಿಕ ಭವನ' ಬನ್ನೇರುಘಟ್ಟ ರಸ್ತೆ
ಬೆಂಗಳೂರು-29, ದಿನಾಂಕ: 09-10-2020

## ಸುತ್ತೋಲೆ

ವಿಷಯ : ಕರ್ನಾಟಕ ವಿಧಾನಸಭೆ ಉಪ ಚುನಾವಣೆ-2020 ರ ಮತದಾನದ ದಿನವಾದ ದಿನಾಂಕ: 03-11-2020 ರಂದು ಅರ್ಹ ಮತದಾರ ಕಾರ್ಮಿಕರಿಗೆ ಕಡ್ಡಾಯವಾಗಿ ವೇತನ ಸಹಿತ ರಜೆಯನ್ನು ಘೋಷಿಸುವ ಬಗ್ಗೆ.

ಉಲ್ಲೇಖ : ಮುಖ್ಯ ಚುನಾವಣಾಧಿಕಾರಿಯವರ ಪತ್ರ ಸಂಖ್ಯೆ : ಸಿಇಸುಇ 01 ಚುರಾಘೋ 2020 ದಿನಾಂಕ: 01-10-2020

= = =

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಚುನಾವಣಾ ಆಯೋಗವು ಕರ್ನಾಟಕ ವಿಧಾನಸಭೆ 136 – ಶಿರಾ ಮತ್ತು 154 – ರಾಜರಾಜೇಶ್ವರಿ ನಗರ ಈ ಕ್ಷೇತ್ರಗಳಿಗೆ ದಿನಾಂಕ: 03-11--2020 ರಂದು ಉಪ ಚುನಾವಣೆಯನ್ನು ಘೋಷಿಸಿದೆ.

ಮತದಾನ ನಡೆಯಲಿರುವ ಕ್ಷೇತ್ರಗಳ ವ್ಯಾಪ್ತಿಯಲ್ಲಿ ನೋಂದಾಯಿತರಾದ ಅರ್ಹ ಮತದಾರರಾಗಿರುವ ಎಲ್ಲಾ ಕಾರ್ಮಿಕರಿಗೆ ಮತ ಚಲಾಯಿಸಲು ಅನುಕೂಲವಾಗುವಂತೆ ಸಂಬಂಧಪಟ್ಟ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳು 1963ರ ಕರ್ನಾಟಕ ಔದ್ಯೋಗಿಕ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ ರಜಾದಿನಗಳು) ಕಾಯ್ದೆಯ ಕಲಂ 3-ಎ ಪ್ರಕಾರ ಮತ ಚಲಾಯಿಸಲು ಅವಕಾಶ ಮಾಡಿ ಕೊಡಬೇಕಾಗುತ್ತದೆ. ಆದ್ದರಿಂದ ಮತದಾನ ನಡೆಯಲಿರುವ ಕ್ಷೇತ್ರಗಳಲ್ಲಿ ಅರ್ಹರಿರುವ ಎಲ್ಲಾ ಕಾರ್ಮಿಕ ಮತದಾರರಿಗೆ ದಿನಾಂಕ: 03-11-2020 ರಂದು ವೇತನ ಸಹಿತ ರಜೆ ನೀಡಿ, ಎಲ್ಲಾ ಅರ್ಹ ಕಾರ್ಮಿಕರು ಸಂವಿಧಾನಾತ್ಮಕ/ಶಾಸನಾತ್ಮಕ ಹಕ್ಕಾದ ಮತವನ್ನು ಚಲಾಯಿಸಲು ಅನುವು ಮಾಡಿಕೊಡಲು ಸೂಚಿಸಿದೆ.

ಈ ವಿಷಯದಲ್ಲಿ ಅರ್ಹ ಯಾವುದೇ ಕಾರ್ಮಿಕರಿಗೆ ಸಂವಿಧಾನಾತ್ಮಕ/ಶಾಸನಾತ್ಮಕ ಹಕ್ಕಾದ ಮತವನ್ನು ಚಲಾಯಿಸಲು ರಜೆ ನೀಡದೆ ಹಾಗೂ ಮತದಾನಕ್ಕೆ ಅವಕಾಶ ಮಾಡಿಕೊಡದಿದ್ದಲ್ಲಿ ಅಂತಹ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳ ವಿರುದ್ಧ 1963ರ ಕರ್ನಾಟಕ ಔದ್ಯೋಗಿಕ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ ರಜಾ ದಿನಗಳು) ಕಾಯ್ದೆಯ ಕಲಂ 3–ಎ ರನ್ವಯ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದು.

ಕರ್ನಾಟಕ ವಿಧಾನಸಭೆ ಉಪ ಚುನಾವಣೆ–2020ರ ಮತದಾನ ದಿನದಂದು ಚುನಾವಣೆ ನಡೆಯುವ ಕ್ಷೇತ್ರದ ವ್ಯಾಪ್ತಿಗೆ ಬರುವ ಕಾರ್ಮಿಕರು, ಕಾರ್ಮಿಕ ಸಂಘಗಳು/ಮಾಲೀಕರ ಸಂಘಗಳ ಪ್ರತಿನಿಧಿಗಳ ಗಮನಕ್ಕೆ ತರಲು ಸಕಲ ಕ್ರಮಗಳನ್ನು ಕೈಗೊಳ್ಳಲು ಹಾಗೂ ಸರ್ಕಾರದ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಈ ಮೂಲಕ ಸಂಬಂಧಪಟ್ಟ ಅಧಿಕಾರಿಗಳು/ನಿರೀಕ್ಷಕರುಗಳಿಗೆ ಸೂಚಿಸಲಾಗಿದೆ.

ಆಯುಕ್ತರು

ಕಾರ್ಮಿಕ ಇಲಾಖೆ, ಕರ್ನಾಟಕ ಸರ್ಕಾರ

ಗೆ:

ಆಡಳಿತವರ್ಗ, ಎಲ್ಲಾ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳು

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ :

1) ಎಲ್ಲಾ ಉಪ ಕಾರ್ಮಿಕ ಆಯುಕ್ತರುಗಳು
2) ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರುಗಳು → ತಮ್ಮ ಅಧೀನದಲ್ಲಿ ಬರುವ ಸಂಬಂಧಿಸಿದ ಕಾರ್ಮಿಕ ಅಧಿಕಾರಿಗಳು / ಹಿರಿಯ ಕಾರ್ಮಿಕ ನಿರೀಕ್ಷಕರು / ಕಾರ್ಮಿಕ ನಿರೀಕ್ಷಕರುಗಳಿಗೆ ಸೂಚಿಸುವುದು

ಪ್ರತಿಯನ್ನು ಮಾಹಿತಿಗಾಗಿ :

1) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
2) ಮುಖ್ಯ ಚುನಾವಣಾಧಿಕಾರಿಗಳು, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು
4) ಸರ್ಕಾರದ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು
5) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು
6) ಅಪರ ಕಾರ್ಮಿಕ ಆಯುಕ್ತರು (ಆಡಳಿತ / ಕೈಗಾರಿಕಾ ಬಾಂಧವ್ಯ), ಬೆಂಗಳೂರು
7) ಜಂಟಿ ಕಾರ್ಮಿಕ ಆಯುಕ್ತರು (ಕನಿಷ್ಠ ವೇತನ), ಬೆಂಗಳೂರು

ಕರ್ನಾಟಕ ಸರ್ಕಾರ

ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ

☎ 080 – 29753051
directorfbish@gmail.com
www.esuraksha.karnataka.gov.in

ನಿರ್ದೇಶಕರ ಕಛೇರಿ,
2ನೇ ಮಹಡಿ, ಕಲ್ಯಾಣ-ಸುರಕ್ಷಾ ಭವನ,
ಡೈರಿ ವೃತ್ತ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-29

ಸಂ: ಎಲ್‌ಜಿಎಲ್–2/ಇತರೆ/ಸಿಆರ್–45/2020–21 ದಿ: 16–10–2020

## ಕಛೇರಿ ಜ್ಞಾಪನ

ವಿಷಯ : ದಿ: 03–11–2020ರಂದು ನಡೆಯಲಿರುವ ಕರ್ನಾಟಕ ವಿಧಾನ ಸಭೆ ಉಪ ಚುನಾವಣೆಯ ಹಿನ್ನೆಲೆಯಲ್ಲಿ ಕಾರ್ಖಾನೆಗಳ ಕಾಯ್ದೆ, 1948ರಡಿ ನೊಂದಾಯಿತವಾಗಿರುವ ಕಾರ್ಖಾನೆಗಳಲ್ಲಿನ ಅರ್ಹ ಮತದಾರ ಕಾರ್ಮಿಕರಿಗೆ ಕಡ್ಡಾಯವಾಗಿ ವೇತನ ಸಹಿತ ರಜೆ ಘೋಷಿಸುವ ಬಗ್ಗೆ.

ಉಲ್ಲೇಖ : ಸರ್ಕಾರದ ಪತ್ರ ಸಂಖ್ಯೆ: ಕಾಇ 145 ಸ್ಪೆಮರ 2020, ದಿ: 13–10–2020.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಚುನಾವಣಾ ಆಯೋಗವು ಕರ್ನಾಟಕ ವಿಧಾನ ಸಭೆಯ 02 ಕ್ಷೇತ್ರಗಳಾದ 136 – ಶಿರಾ ಮತ್ತು 154 – ರಾಜರಾಜೇಶ್ವರಿ ನಗರ ಇಲ್ಲಿ ದಿ: 03–11–2020ರಂದು ಉಪ ಚುನಾವಣೆಯನ್ನು ಘೋಷಿಸಿದೆ.

ಮೇಲೆ ತಿಳಿಸಿರುವ ಮತದಾನ ನಡೆಯಲಿರುವ ಕ್ಷೇತ್ರಗಳ ವ್ಯಾಪ್ತಿಯಲ್ಲಿನ ಕಾರ್ಖಾನೆಗಳ ಕಾಯ್ದೆ, 1948ರಡಿ ನೊಂದಾಯಿತವಾಗಿರುವ ಕಾರ್ಖಾನೆಗಳಲ್ಲಿ ಕೆಲಸ ಮಾಡುವ ಅರ್ಹ ಮತದಾರರಿಗೆ ಮತ ಚಲಾಯಿಸಲು ಅನುಕೂಲವಾಗುವಂತೆ ಸಂಬಂಧಪಟ್ಟ ಕಾರ್ಖಾನೆಗಳ ಆಡಳಿತವರ್ಗದವರು ಅವಕಾಶ ಮಾಡಿಕೊಡಬೇಕಾಗುತ್ತದೆ. ಆದ್ದರಿಂದ, ಮತದಾನ ನಡೆಯಲಿರುವ ಕ್ಷೇತ್ರಗಳಲ್ಲಿನ ನೊಂದಾಯಿತ ಕಾರ್ಖಾನೆಗಳಲ್ಲಿ ಕೆಲಸ ಮಾಡುವ ಎಲ್ಲ ಅರ್ಹ ಕಾರ್ಮಿಕ ಮತದಾರರಿಗೆ ಪ್ರಜಾ ಪ್ರಾತಿನಿಧ್ಯ ಕಾಯ್ದೆ, 1951ರ ಕಲಂ 135(ಬಿ) ರಂತೆ ದಿ: 03–11–2020ರಂದು ವೇತನ ಸಹಿತ ರಜೆ ನೀಡಿ ಕಾರ್ಮಿಕ ಮತದಾರರ ಸಂವಿಧಾನಾತ್ಮಕ / ಶಾಸನಾತ್ಮಕ ಹಕ್ಕನ್ನು ಚಲಾಯಿಸಲು ಅನುವು ಮಾಡಿಕೊಡಲು ಸೂಚಿಸಿದೆ.

ವಿಧಾನಸಭೆ ಉಪ ಚುನಾವಣೆಯ ಮತದಾನದ ದಿನದಂದು ಚುನಾವಣೆ ನಡೆಯುವ ಕ್ಷೇತ್ರದ ವ್ಯಾಪ್ತಿಗೆ ಒಳಪಡುವ ನೊಂದಾಯಿತ ಕಾರ್ಖಾನೆ / ಕೈಗಾರಿಕಾ ಸಂಸ್ಥೆಗಳ ಆಡಳಿತ ವರ್ಗದವರಿಗೆ ಈ ಬಗ್ಗೆ ಕ್ರಮ ಕೈಗೊಳ್ಳಲು ಹಾಗೂ ಸರ್ಕಾರದ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸುವಂತೆ ಸಂಬಂಧಪಟ್ಟ ಕ್ಷೇತ್ರಾಧಿಕಾರಿಗಳಿಗೆ ಈ ಮೂಲಕ ಸೂಚಿಸಿದೆ.

**ನಿರ್ದೇಶಕರು**
ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ
ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ಬೆಂಗಳೂರು

**ಇವರಿಗೆ:**

1. ಕಾರ್ಖಾನೆಗಳ ಜಂಟಿ ನಿರ್ದೇಶಕರು – 1 / 2, ಬೆಂಗಳೂರು / ಬಳ್ಳಾರಿ.
2. ಕಾರ್ಖಾನೆಗಳ ಉಪ ನಿರ್ದೇಶಕರು, ಬೆಂಗಳೂರು ವಿಭಾಗ–4 / ತುಮಕೂರು.
3. ಕಾರ್ಖಾನೆಗಳ ಹಿರಿಯ ಸಹಾಯಕ ನಿರ್ದೇಶಕರು, ವಿಭಾಗ–7, ಬೆಂಗಳೂರು.
4. ಕಾರ್ಖಾನೆಗಳ ಸಹಾಯಕ ನಿರ್ದೇಶಕರು, ಬೆಂಗಳೂರು ವಿಭಾಗ – 11 / 12 / 13 / 15 / 17 / 19 / 20.
5. ಕಛೇರಿ ಪ್ರತಿ.